**ದಿನಾಂಕಃ 06.02.2021 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ಮಾಡಿಸಲಾಯಿತು.**

**ಪಾಟೀ ಸವಾಲುಃ ಎದುರುದಾರರ ಪರ ವಕೀಲರಿಂದ.**

ನಾನು ಅಪಘಾತವನ್ನು ನೋಡಿರುವುದಿಲ್ಲ. ಅಪಘಾತ ಸ್ಥಳವನ್ನು ನಾನು ನೋಡಿರುತ್ತೇನೆ. ಅಪಘಾತ ಕೋಲಾರ, ಬೆಂಗಳೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ಆಗಿರುತ್ತದೆ ಎಂದರೆ ನನಗೆ ಗೊತ್ತಿಲ್ಲ. ಪೋಲೀಸರಿಗೆ ದೂರನ್ನು ನಾನೇ ನೀಡಿರುತ್ತೇನೆ. ಅಪಘಾತದ ಬಗ್ಗೆ ಸ್ಥಳದಲ್ಲಿ ಇದ್ದವರು ನನಗೆ ದೂರವಾಣಿಯ ಮೂಲಕ ತಿಳಿಸಿದರು. ಅಪಘಾತವು ರಾತ್ರಿ 7.00 ರ ಸಮಯದಲ್ಲಿ ಆಗಿರುತ್ತದೆ. ಅಪಘಾತ ಸಪ್ತಗಿರಿ ಕಲ್ಯಾಣ ಮಂಟಪದ ಬಳಿ ಆಗಿರುತ್ತದೆ ಎಂದರೆ ಸರಿ. ಅಪಘಾತ ಸ್ಥಳವು ಡಬಲ್ ರಸ್ತೆಯಾಗಿದೆ ಎಂದರೆ ಸರಿಯಲ್ಲ. ಅಪಘಾತ ಸ್ಥಳವು ಡಬಲ್ ರಸ್ತೆಯಾಗಿದ್ದು, ರಾಷ್ಟ್ರೀಯ ಹೆದ್ದಾರಿ ಆಗಿರುತ್ತದೆ ಎಂದರೆ ನನಗೆ ಹೇಳಲು ಆಗುವುದಿಲ್ಲ. ಅಪಘಾತ ಸ್ಥಳದಲ್ಲಿ ರಸ್ತೆ ದಾಟಲು ಜೀಬ್ರಾ ಕ್ರಾಸಿಂಗ್ ಇರಲಿಲ್ಲ ಎಂದರೆ ಸಾಕ್ಷಿಯು ನನ್ನ ಗಂಡ ರಸ್ತೆಯ ಪಕ್ಕದಲ್ಲಿ ನಿಂತಿದ್ದರು ಎನ್ನುತ್ತಾರೆ. ಆ ದಿನ ಎದುರುದಾರರ ಬಸ್ ಚಾಲಕರು ಬೆಂಗಳೂರಿನಿಂದ ಮದನಪಲ್ಲಿಗೆ ನಿಧಾನವಾಗಿ ಬಸ್ಸನ್ನು ಚಲಾಯಿಸುತ್ತಿದ್ದರು ಎಂದರೆ ಅದನ್ನು ನಾನು ನೋಡಿರುವುದಿಲ್ಲ. ನನ್ನ ಗಂಡ ತುರ್ತಾಗಿ ಬಲಭಾಗದಿಂದ ಎಡಭಾಗಕ್ಕೆ ರಸ್ತೆಯನ್ನು ದಾಟುವಾಗ ಅಪಘಾತ ಆಗಿರುತ್ತದೆ ಎಂದರೆ ನನಗೆ ಹೇಳಲು ಆಗುವುದಿಲ್ಲ. ನನ್ನ ಗಂಡನ ತಪ್ಪಿನಿಂದಲೇ ಅಪಘಾತ ಆಗಿರುತ್ತದೆ ಎಂದರೆ ಸರಿಯಲ್ಲ. ಅಪಘಾತವು ನನ್ನ ಗಂಡನ ತಪ್ಪಿನಿಂದ ಆಗಿದ್ದರೂ ಸಹಿತ ಪರಿಹಾರಕ್ಕಾಗಿ ಎದುರುದಾರರ ವಿರುದ್ಧ ಸುಳ್ಳು ದೂರು ನೀಡಿರುತ್ತೇನೆ ಎಂದರೆ ಸರಿಯಲ್ಲ.

2. ನನ್ನ ಗಂಡನ ಅಂತ್ಯಕ್ರಿಯೆ ಹಾಗೂ ಚಿಕಿತ್ಸೆಗೆ ರೂ1,00,000/- ಖರ್ಚು ಮಾಡಿರುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ವಿಜಯವಾಡದಲ್ಲಿ ನನ್ನ ಗಂಡ ಒಬ್ಬರ ಬಳಿ ಕ್ಲೀನರ್ ಆಗಿ ಕೆಲಸ ಮಾಡುತ್ತಿದ್ದರು ಆದರೆ ಅವರ ಹೆಸರು ನನಗೆ ಗೊತ್ತಿಲ್ಲ. ನನ್ನ ಗಂಡ ಕ್ಲೀನರ್ ಆಗಿ ಕೆಲಸ ಮಾಡುತ್ತಿರಲಿಲ್ಲ ಎಂದರೆ ಸರಿಯಲ್ಲ. ದಿನಕ್ಕೆ ರೂ.1,000/- ಸಂಪಾದನೆ ಇರಲಿಲ್ಲ ಎಂದರೆ ಸರಿಯಲ್ಲ. ಅಪಘಾತ ಸಮಯದಲ್ಲಿ ನನ್ನ ಗಂಡನಿಗೆ 42 ವರ್ಷ ಆಗಿತ್ತು. ಪರಿಹಾರ ಪಡೆಯುವ ಉದ್ದೇಶದಿಂದ ದಾಖಲೆಗಳನ್ನು ಸೃಷ್ಟಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಅಪಘಾತವು ಎದುರುದಾರರ ಬಸ್ ಚಾಲಕರ ತಪ್ಪಿನಿಂದ ಆಗಿರುವುದಿಲ್ಲ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ**

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

ಓ ಹೇ ಕೇ ಸ ಇದೆ

(ವಾಣಿ ಎ. ಶೆಟ್ಟಿ)
17 ನೇ ಅಪರ ನ್ಯಾಯಾಧೀಶರು ಮತ್ತು
ಎಂಎಸಿಟಿ ಸದಸ್ಯರು